# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 25/5/2020

## ರಾಜ್ಯದಲ್ಲಿ 2089ಕ್ಕೇರಿದ ಕರೊನಾ ಕೇಸ್ ಭಾನುವಾರ ಒಂದೇ ದಿನ 130 ಪ್ರಕರಣ

# 2000 ಬ್ಯಾಟಿಂಗ್

25-5-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ ಕರೊನಾ ನಾಗಾಲೋಟ ಮುಂದುವರಿದಿದ್ದು ಭಾನುವಾರ 130 ಹೊಸ ಪ್ರಕರಣಗಳು ದೃಢಪಟ್ಟಿವೆ. ಇದರೊಂದಿಗೆ ಸೋಂಕಿತರ ಸಂಖ್ಯೆ 2,089ಕ್ಕೆ ಏರಿಕೆಯಾದಂತಾಗಿದೆ. ಸಂಖ್ಯೆಗಳ ಏರಿಕೆ ಹೊರತಾಗಿಯೂ ವಿವಿಧ ಜಿಲ್ಲೆಗಳ 46 ಜನರು ಸೋಂಕಿನಿಂದ ಗುಣಮುಖರಾಗಿರುವುದು ಕೊಂಚ ಸಮಾಧಾನಕರ ಸಂಗತಿ.



ಮೇ 15 ರಂದು ಸಾವಿರದ ಗಡಿ ತಲುಪಿದ್ದ ಸೋಂಕಿತರ ಸಂಖ್ಯೆ ನಂತರದ ಹತ್ತೇ ದಿನದಲ್ಲಿ ದ್ವಿಗುಣವಾಗಿದೆ. ಕಳೆದ 4 ದಿನಗಳಿಂದ ನಿತ್ಯ ಸರಾಸರಿ 100ಕ್ಕಿಂತ ಹೆಚ್ಚು ಜನರಿಗೆ ಸೋಂಕು ತಗುಲುತ್ತಿದೆ. ಶನಿವಾರ 216 ಕೇಸ್ ಪತ್ತೆಯಾಗಿತ್ತು. ಒಟ್ಟಾರೆ ಭಾನುವಾರ ಬೆಳಕಿಗೆ ಬಂದ 130 ಸೋಂಕಿತರಲ್ಲಿ ಮಹಾರಾಷ್ಟ್ರ, ಗುಜರಾತ್ ಹಾಗೂ ಆಂಧ್ರಪ್ರದೇಶ ದಿಂದ ವಾಪಸಾದ 105 ಜನರಿದ್ದಾರೆ. ಚಿಕ್ಕಬಳ್ಳಾಪುರ 27, ಯಾದಗಿರಿ 24, ಉಡುಪಿ 23, ಮಂಡ್ಯ 15, ಹಾಸನ 14, ಕಲಬುರಗಿ, ಬೀದರ್ ತಲಾ 6, ದಾವಣಗೆರೆ 4, ಉತ್ತರ ಕನ್ನಡ, ಶಿವಮೊಗ್ಗ, ತುಮಕೂರು ತಲಾ 2, ದಕ್ಷಿಣ ಕನ್ನಡ, ವಿಜಯಪುರ, ಬೆಂಗಳೂರು, ಧಾರವಾಡ, ಕೊಡಗು ಜಿಲ್ಲೆಗಳಲ್ಲಿ ತಲಾ ಒಬ್ಬರಿಗೆ ಸೋಂಕು ಪತ್ತೆಯಾಗಿದೆ. ವಂದೇ ಭಾರತ್ ಮಿಷನ್ ಯೋಜನೆಯಡಿ ವಿಶೇಷ ವಿಮಾನಗಳ ಮೂಲಕ ಬಂದು ಹೋಟೆಲ್‌ನಲ್ಲಿ ವಾಸ್ತವ್ಯ ಇರುವವರ ಪೈಕಿ ಪೈಕಿ ಬ್ರಿಟನ್‌ನಿಂದ ಬೆಂಗಳೂರಿಗೆ ಬಂದ ಒಬ್ಬರಿಗೆ ಸೋಂಕು ದೃಢಪಟ್ಟಿದೆ.

### ಭಾರತದಲ್ಲಿ ಪ್ರತಿದಿನ 6 ಸಾವಿರ ಕೇಸ್

**ಭಾರತದಲ್ಲಿ ಕಳೆದ ಮೂರು ದಿನಗಳಿಂದ ಪ್ರತಿನಿತ್ಯ 6 ಸಾವಿರಕ್ಕೂ ಅಧಿಕ ಸೋಂಕು ಪ್ರಕರಣಗಳು ಬೆಳಕಿಗೆ ಬರುತ್ತಿರುವುದು ಆತಂಕ ಮೂಡಿಸಿದೆ. ಒಟ್ಟಾರೆ ಸೋಂಕಿತರ ಸಂಖ್ಯೆ 1.38 ಲಕ್ಷ ದಾಟಿದ್ದು, 4,000ಕ್ಕೂ ಅಧಿಕ ಜನರು ಸಾವನ್ನಪ್ಪಿದ್ದಾರೆ. 57 ಸಾವಿರಕ್ಕೂ ಅಧಿಕ ರೋಗಿಗಳು ಗುಣಮುಖರಾಗಿದ್ದು, ಇನ್ನೂ 76 ಸಾವಿರ ಸಕ್ರಿಯ ಪ್ರಕರಣಗಳಿವೆ.**